ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	13(121)
ಮಾನ್ಯ ಸದಸ್ಯರ ಹೆಸರು	:	ಶ್ರೀ ಸಿ.ಎಂ.ಲಿಂಗಪ್ಪ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ:	:	**21.09.2020**
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಐಟಿ & ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)

	ಪ್ರಶ್ನೆ	ಉತ್ತರ
ಅ	2020-21ರ ಆಯವ್ಯಯದಲ್ಲಿ ಘೋಷಿಸಿದಂತೆ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ತಲಾ ಐದು ಕೋಟಿ ರೂ.ಗಳ ವೆಚ್ಚದಲ್ಲಿ ಜಿಯೋಸ್ಪೇಶಿಯಲ್ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ?	ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ.
ಆ	ತಂತ್ರಜ್ಞಾನ ಕೇಂದ್ರಗಳು ಸ್ಥಾಪಿಸಿಲ್ಲವಾದಲ್ಲಿ ಕಾರಣಗಳೇನು?	COVID-19ರ ಕಾರಣಗಳಿಂದ ಹಣಕಾಸಿನ ಕೊರತೆ ಇದ್ದುದರಿಂದ ಅನುಷ್ಠಾನ ವಿಳಂಬವಾಗಿದ್ದು, ಪ್ರಸ್ತುತ ಎರಡೂ ಕೇಂದ್ರಗಳ ಸ್ಥಾಪನೆ ಬಗ್ಗೆ ಅನುದಾನದ ಲಭ್ಯತೆ ಆಧಾರ ಮೇಲೆ ಪರಿಶೀಲಿಸಿ ಕ್ರಮವಹಿಸಲಾಗುವುದು. ಆದಾಗ್ಯೂ ಜಿಯೋಸ್ಪೇಶಿಯಲ್ ತಂತ್ರಜ್ಞಾನ ಕೇಂದ್ರವನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿ ಇಲ್ಲಿ ಸ್ಥಾಪಿಸುವ ಪ್ರಯುಕ್ತ ಪೂರ್ವಭಾವಿ ಕಾರ್ಯಚಟುವಟಿಕೆಗಳಿಗೆ ರೂ.50.00ಲಕ್ಷಗಳನ್ನು ಈಗಾಗಲೆ ಬಿಡುಗಡೆ ಮಾಡಲಾಗಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್-ಜಿಯೋಸ್ಪೇಶಿಯಲ್ ತಂತ್ರಜ್ಞಾನ ಸ್ಥಾಪನೆಯ ಪ್ರಕ್ರಿಯೆ ಜಾರಿಯಲ್ಲಿದೆ. ಮತ್ತು ವಿತಾವಿಯು ಈಗಾಗಲೇ Indian Institute of Remote Sensing, Deharadun, Indian Space Research Organisation (IIRS-ISRO), Department of Space, Govt. of India ಇವರೊಂದಿಗೆ ಒಡಂಬಡಿಕೆ (MoU) ಮಾಡಿಕೊಳ್ಳುವ ಪ್ರಕ್ರಿಯೆ ಕೂಡ ಜಾರಿಯಲ್ಲಿದೆ.

		ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿರುವ ಮೂಲ ಸೌಕರ್ಯ (ಒಂದು ಸೆಮಿನಾರ್ ಹಾಲ್, ಒಂದು ಸ್ಮಾರ್ಟ್ ಕ್ಲಾಸ್ ಕೊಠಡಿ, ಎರಡು ಪ್ರಯೋಗಾಲಯಗಳು ಮತ್ತು ಒಂದು ಕಛೇರಿ ಕೊಠಡಿ ಕೇಂದ್ರ) ಗಳನ್ನು ಬಳಸಿಕೊಂಡು ತರಬೇತಿ ಹಾಗೂ ಸಂಶೋಧನೆಗಳನ್ನು ನಡೆಸಲಾಗುತ್ತಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಬೆಳಗಾವಿಯಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್ ಜಿಯೋಸ್ಪೇಶಿಯಲ್ ತಂತ್ರಜ್ಞಾನ ಕೇಂದ್ರ ಸ್ಥಾಪನೆ ಬಗ್ಗೆ ಸವಿವರ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿದ್ದು, ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಜಿಯೋಸ್ಪೇಶಿಯಲ್ ತಂತ್ರಜ್ಞಾನ ಕೇಂದ್ರ ಸ್ಥಾಪಿಸುವ ಬಗ್ಗೆ ಸವಿವರ ಪ್ರಸ್ತಾವನೆ ತರಿಸಿ ಪರಿಶೀಲಿಸಲಾಗುವುದು.
ಇ	ಸದರಿ ತಂತ್ರಜ್ಞಾನ ಕೇಂದ್ರಗಳನ್ನು ಯಾವಾಗ ಸ್ಥಾಪಿಸಲಾಗುವುದು?	ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದ್ದು, COVID-19 ರ ಕಾರಣಗಳಿಂದ ಹಣಕಾಸಿನ ಕೊರತೆ ಇದ್ದುದರಿಂದ ಆರ್ಥಿಕ ಮತ್ತು ಯೋಜನಾ ಇಲಾಖೆಯ ಸಹಮತ/ ಅಭಿಪ್ರಾಯದನ್ವಯ ಕ್ರಮವಹಿಸಲಾಗುವುದು.

ಇಡಿ 151 ಟಿಇಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)

ಉಪ ಮುಖ್ಯಮಂತ್ರಿಗಳು

(ಉನ್ನತ ಶಿಕ್ಷಣ, ಐಟಿ & ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)